ಕಳಪೆ ಕಾಮಗಾರಿ ದುರಸ್ತಿಗೆ ದುಪ್ಪಟ್ಟು ವೆಚ್ಚದಲ್ಲಿ ಹೊಸ ಅಂದಾಜು ಯೋಜನೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 675(973)

ಸದಸ್ಯರ ಹೆಸರು : ಶ್ರೀ ಅರಗ ಜ್ಞಾನೇಂದ್ರ(ತೀರ್ಥಹಳ್ಳಿ)

ಉತ್ತರಿಸುವ ಸಚಿವರು : ಶ್ರೀ ಧರ್ಮಸಿಂಗ್(ಲೋಕೋಪಯೋಗಿ ಸಚಿವರು)

ಪ್ರಶ್ನೆ

1. ಕಳಪೆ ಗುಣಮಟ್ಟದ ಕಾಮಗಾರಿ ಮಾಡಿಸಿರುವ ಇಲಾಖೆಯು ಅದರ ಮೂಲವೆಚ್ಚಕ್ಕಿಂತ ದುಪ್ಪಟ್ಟು ವೆಚ್ಚದಲ್ಲಿ ದುರಸ್ತಿಗೊಳಿಸಲು ಸಮಗ್ರ ಹೊಸ ಯೋಜನೆ ರೂಪಿಸಿದೆಯೇ?

2. ಮೂಲ(ಕಳಪೆ) ಕಾಮಗಾರಿ ಮಾಡಿದ ಗುತ್ತಿಗೆದಾರರು ಯಾರು? ಮತ್ತು ಪುನಃ ಅವರಿಗೆ ಹೊಸ ದುರಸ್ತಿಯ ಕಾಮಗಾರಿಗೆ ಗುತ್ತಿಗೆ ನೀಡಿರುವುದು ನಿಜವೇ?

3. ಈ ನಿಟ್ಟಿನಲ್ಲಿ ಸರ್ಕಾರ ಯಾವ ನಿರ್ಧಾರ ಕೈಗೊಂಡಿದೆ? (ವಿವರ ನೀಡುವುದು)

ಉತ್ತರ

1. ಈ ರೀತಿ ಯೋಜನೆ ರೂಪಿಸಿರುವುದಿಲ್ಲ.

2. ಇಂತಹ ಪ್ರಕರಣಗಳು ಯಾವುದೂ ಇರುವುದಿಲ್ಲ. ಆದ್ದರಿಂದ ಪುನಃ ಅವರಿಗೆ ಹೊಸ ದುರಸ್ತಿ ಕಾಮಗಾರಿ ಗುತ್ತಿಗೆ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

3. ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯ ಕಾಮಗಾರಿಗಳು ಕಳಪೆ ಕಾಮಗಾರಿಗಳೆಂದು ದೃಢಪಟ್ಟಿರುವ ಪ್ರಕರಣಗಳು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 676(977)

ಸದಸ್ಯರ ಹೆಸರು : ಶ್ರೀ ಅರಗ ಜ್ಞಾನೇಂದ್ರ(ತೀರ್ಥಹಳ್ಳಿ)

ಉತ್ತರಿಸುವ ಸಚಿವರು : ಶ್ರೀ ಧರ್ಮಸಿಂಗ್(ಲೋಕೋಪಯೋಗಿ ಸಚಿವರು)